**CMRIT organized a Charcoal art poster making competition on the theme say no to Drugs**



## Publication: Eesanje

**Date:29-06-22 Page 07**

# ಮಾದಕ ವ್ಯಸನ ದುಷ್ಪರಿಣಾಮ ಕುರಿತು ಜಾಗೃತಿ ಅಭಿಯಾನ



**ಬೆಂಗಳೂರು, ಜೂ.29-** ಇಂದಿನ ವಿದ್ಯಾರ್ಥಿ ಸಮುದಾಯ ಮೋಜಿನ ಹೆಸರಿನಲ್ಲಿ ಮಾದಕದ್ರವ್ಯ ವ್ಯಸನಿಗಳಾಗುತ್ತಿದ್ದು, ಇದರ ವಿರುದ್ಧಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇತ್ತೀಚೆಗೆ ಸೇ ನೋ ಟುಡ್ರಗ್ಸ್ ಹೆಸರಿನಲ್ಲಿ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನ ಆಚರಿಸುವ ಮೂಲಕ ಜಾಗೃತಿ ಅಭಿಯಾನ ಹಮ್ಮಿಕೊಂಡಿತ್ತು.

ಮಾದಕದ್ರವ್ಯ ವ್ಯಸನದ ದುಷ್ಪರಿಣಾಮ ಬಿಂಬಿಸುವ ಬಿತ್ತಿ ಚಿತ್ರರಚಿಸುವ ಸ್ಪರ್ಧೆಯನ್ನು ವಿದ್ಯಾರ್ಥಿಗಳಿಗೆ ಏರ್ಪಡಿಸುವ ಮೂಲಕ ಕಾರ್ಯಕ್ರಮವನ್ನುಅರ್ಥಪೂರ್ಣವಾಗಿ ಮಾಡಿತು. ಈ ಸ್ಪರ್ಧೆಯಲ್ಲಿ 85ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಮಾದಕದ್ರವ್ಯ ವ್ಯಸನದ ಮಾರಕತೆಯನ್ನು ಬಿಂಬಿಸುವ ಚಿತ್ರಗಳನ್ನು ರಚಿಸುವ ಮೂಲಕ ಮಾದಕದ್ರವ್ಯ ವ್ಯಸನದ ವಿರುದ್ಧ ಅಭಿಯಾನ ಸಾರಿದರು.

ಈ ಜಾಗೃತಿ ಅಭಿಯಾನ ಕಾರ್ಯಕ್ರಮದ ಮುಖೇನ ಸಾಮಾಜಿಕ ಪಿಡುಗಾಗಿರುವ ಮಾದಕದ್ರವ್ಯವನ್ನುತಡೆಗಟ್ಟಿ ವ್ಯಸನ ಮುಕ್ತ ಸಮಾಜವನ್ನು ಕಟ್ಟುವ ಕೈಂಕರ್ಯದಲ್ಲಿ ಸರ್ಕಾರ ಮತ್ತು ಸಂಘ-ಸಂಸ್ಥೆಗಳ ಜೊತೆ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಸದಾಕೈಜೋಡಿಸುತ್ತದೆ ಎಂಬ ದೃಢ ಸಂಕಲ್ಪವನ್ನು ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳು ಮಾಡಿದರು.

ಈ ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಸಂಜಯ್‌ಜೈನ್, ವಿದ್ಯಾರ್ಥಿ ಸಮುದಾಯದ ಮೇಲೆ ರಾಷ್ಟ್ರದ ಭವಿಷ್ಯ ನಿಂತಿದೆ. ಆದರೆ, ವಿದ್ಯಾರ್ಥಿಗಳು ಮಾದಕ ದ್ರವ್ಯದ ಮೋಹಕ್ಕೆ ಒಳಗಾಗಿ ಬದುಕನ್ನೆ ನಾಶಪಡಿಸಿ ಕೊಳ್ಳುತ್ತಿದ್ದಾರೆ. ಇಂತಹ ಸಾಮಾಜಿಕ ಪಿಡಿಗಿನ ವಿರುದ್ಧ ಯುವ ಸಮುದಾಯ ಜಾಗೃತರಾಗಿ ಹೋರಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಮಾದಕ ದ್ರವ್ಯ ವ್ಯಸನದ ದುಷ್ಪರಿಣಾಮಗಳನ್ನು ಬಿಂಬಿಸುವ ಚಿತ್ರ ರಚಿಸುವ ಸ್ಪರ್ಧೆಯಲ್ಲಿ ಸಿಎಂಆರ್ ವಿಶ್ವವಿದ್ಯಾಲಯದ ವಿದ್ಯಾರ್ಥಿ ಚಿರಾಗ್ ಶೆಟ್ಟಿ ಪ್ರಥಮ ಬಹುಮಾನವನ್ನು ಮತ್ತು ಎಂವಿ ಜೆಕಾಲೇಜಿನ ವಿದ್ಯಾರ್ಥಿನಿ ಸುಪ್ರಿತ ವಿಕ್ರಂ ದ್ವಿತೀಯ ಬಹುಮಾನ ಪಡೆದುಕೊಂಡರು.

ಡಾ. ಫಜಲುರ್‌ರಹಮಾನ್ ಮಾತನಾಡಿ, ಇಂದಿನ ಯುಗದಲ್ಲಿ ವಿದ್ಯಾರ್ಥಿಗಳಿಗೆ ಕಲಿಕೆಯ ಜೊತೆಗೆ ಮಾದಕ ವ್ಯಸನಗಳ ಕುರಿತ ಶಿಕ್ಷಣ ಮತ್ತು ಅರಿವು ಅತ್ಯಾವಶ್ಯಕ ಎಂದು ಅಭಿಪ್ರಾಯಪಟ್ಟರು.